ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್, ವಾರ್ತಾ ಮತ್ತು ಪ್ರಚಾರ ಸಚಿವರು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬಂಗಾರಪೇಟೆ ತಾಲ್ಲೂಕಿನಲ್ಲಿ ಹೆಚ್ಚು ಪಶುವೈದ್ಯ ಆಸ್ಪತ್ರೆಗಳನ್ನು ಸ್ಥಾಪಿಸುವ ಬಗ್ಗೆ

೯೦೧(೧೪೫೩) ಶ್ರೀ ಎಂ. ನಾರಾಯಣ ಸ್ವಾಮಿ (ಬೇತಮಂಗಲ).—ಮಾನ್ಯ ಅರಣ್ಯ ಹಾಗೂ ಪಶುಸಂಗೋಪನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ಬಂಗಾರಪೇಟೆ ತಾಲ್ಲೂಕಿನಲ್ಲಿರುವ ಪಶುವೈದ್ಯ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಈ ತಾಲ್ಲೂಕಿನಲ್ಲಿ ಅಗತ್ಯಕ್ಕಿಂತ ಕಡಿಮೆ ಪಶುವೈದ್ಯ ಆಸ್ಪತ್ರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಅಗತ್ಯವಿರುವಷ್ಟು ಸಂಖ್ಯೆಯಲ್ಲಿ ಪಶುವೈದ್ಯ ಆಸ್ಪತ್ರೆಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಬಿ. ಬಸವಲಿಂಗಪ್ಪ (ಅರಣ್ಯ ಮತ್ತು ಪಶುಸಂಗೋಪನೆ ಸಚಿವರು).

ಅ) ಓ.

ಆ) ಬಂದಿದೆ.

ಇ) ಹೌದು.

ಈ) ಉದ್ಭವಿಸುವುದಿಲ್ಲ.

ಚನ್ನಪಟ್ಟಣದ ಶ್ರೀ ಕುಂವೆಂಪು ಕಾಲೇಜಿನವರು ಹೆಚ್ಚು ಭೂಮಿಯನ್ನು ಒತ್ತುವರಿ ಮಾಡಿರುವುದು

೯೦೨(೧೪೫೭) ಶ್ರೀ ಬಿ. ಸ್ವಾಮಿರಾವ್ (ಹೊಸನಗರ).—ಮಾನ್ಯ ಅರಣ್ಯ ಹಾಗೂ ಪಶು ಸಂಗೋಪನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ಜಮೀನು ಒತ್ತುವರಿ ಕಾನೂನು ಬಾಹಿರವೇ?

ಆ) ಚನ್ನಪಟ್ಟಣದ ಶ್ರೀ ಕುವೆಂಪು ಕಾಲೇಜಿಗೆ ನೀಡಿದ್ದ ಅರಣ್ಯ ಭೂಮಿಯು ವಿಸ್ತೀರ್ಣವೆಷ್ಟು?

ಇ) ಈ ಮಂಜೂರಾತಿ ಅಲ್ಲದೇ ಕಾಲೇಜ್ ಆಡಳಿತ ಮಂಡಳಿ ಹೆಚ್ಚು ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಪ್ರಕರಣದ ಬಗ್ಗೆ ಅರಣ್ಯ ಇಲಾಖೆಯು ಯಾವ ಕ್ರಮ ಕೈಗೊಂಡಿದೆ?

ಶ್ರೀ ಬಿ. ಬಸವಲಿಂಗಪ್ಪ (ಅರಣ್ಯ ಮತ್ತು ಪಶುಸಂಗೋಪನೆ ಸಚಿವರು).—

ಅ) ಹೌದು.

ಆ) ೧೦ ಹೆಕ್ಟೇರ್.

ಇ) ಗಮನಕ್ಕೆ ಬಂದಿಲ್ಲ.

ಈ) ಉದ್ಭವಿಸುವುದಿಲ್ಲ.